ಕನ್ನಡ ಮಾಧ್ಯಮ ಅನುಮತಿ

1339(1957); ಶ್ರೀ ಅರವಿಂದ ಲಿಂಬಾವಳಿ (ಮಹದೇವಪುರ)

ಅ) ಬೆಂಗಳೂರು ನಗರದಲ್ಲಿ ಕನ್ನಡ ಮಾಧ್ಯಮದಲ್ಲಿ ಶಾಲೆಗಳನ್ನು ತೆರೆಯಲು ಅನುಮತಿ ಪಡೆದು ಆಂಗ್ಲ ಮಾಧ್ಯಮದಲ್ಲಿ ಶಾಲೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಎಷ್ಟು ಶಾಲೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ಅನುಮತಿ ಪಡೆದು ಆಂಗ್ಲ ಮಾಧ್ಯಮದಲ್ಲಿ ನಡೆಸುತ್ತಿವೆ [ವಿವರ ನೀಡುವುದು];

ಇ) ಇವುಗಳನ್ನು ನಿರ್ಬಂಧಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಬೆಂಗಳೂರು ಉತ್ತರ ಜಿಲ್ಲೆ : 377

ಬೆಂಗಳೂರು ದಕ್ಷಿಣ ಜಿಲ್ಲೆ : 643

ಇ) ಇಲಾಖೆಯಿಂದ ಕನ್ನಡ ಮಾಧ್ಯಮದಲ್ಲಿ ಶಾಲೆ ನಡೆಸುವುದಾಗಿ ಶಾಲಾ ಆಡಳಿತ ಮಂಡಳಿಗಳು ಅನುಮತಿಯನ್ನು ಪಡೆದು ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡುತ್ತಿದ್ದು, ಇಂತಹ ಶಾಲಾ ಪ್ರಕರಣಗಳನ್ನು 2006–07 ನೇ ಸಾಲಿನಲ್ಲಿ ರಾಜ್ಯದಾದ್ಯಂತ ಗುರುತಿಸಿ ಅಂತಹ ಶಾಲೆಗಳ ಮಾನ್ಯತೆಯನ್ನು ಹಿಂಪಡೆಯುವ ಬಗ್ಗೆ ಜಿಲ್ಲಾ ಉಪ ನಿರ್ದೇಶಕರ ಹಂತದಲ್ಲಿ ಕ್ರಮ ವಹಿಸಲಾಗಿದೆ. ಕೆಲವು ಶಾಲಾ ಆಡಳಿತ ಮಂಡಳಿಗಳು ಸರ್ಕಾರದ ನಿರ್ದೇಶನದಂತೆ ಸ್ವಇಚ್ಛಾ ಯೋಜನೆಯಡಿ ಸರ್ಕಾರಕ್ಕೆ ಆಡಳಿತಾತ್ಮಕ ಶುಲ್ಕವನ್ನು ಪಾವತಿ ಮಾಡಿ ಮರುಮಾನ್ಯತೆ

ಪಡೆದು ಕನ್ನಡ ಮಾಧ್ಯಮದಲ್ಲಿ ನಡೆಸುತ್ತಿವೆ. ಇನ್ನುಳಿದ ಶಾಲಾ ಆಡಳಿತ ಮಂಡಳಿಗಳು ಸರ್ಕಾರದ ಆದೇಶದ ವಿರುದ್ಧ ಮಾನ್ಯ ನ್ಯಾಯಾಲಯದಲ್ಲಿ ದಾವೆ ಹೂಡಿದ್ದು ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ:6/5/2014 ರಂದು ತೀರ್ಪು ನೀಡಿ ಮಗು ಮತ್ತು ಮಗುವಿನ ಪೋಷಕರು ಇಚ್ಛೆಪಡುವ ಮಾಧ್ಯಮದಲ್ಲಿ ಶಿಕ್ಷಣ ನೀಡುವಂತೆ ಆದೇಶ ನೀಡಿರುತ್ತದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಮರು ಪರಿಶೀಲಿಸುವಂತೆ ಕ್ಯೂರೇಟೀವ್ ಪೆಟಿಷನ್ ದಾಖಲಿಸಲು ಕ್ರಮ ಕೈಗೊಳ್ಳುವಂತೆ ಅಡ್ವೋಕೇಟ್ ಜನರಲ್ ರವರಿಗೆ ತಿಳಿಸಲಾಗಿದೆ.

ಭಾಷಾ ನೀತಿಯನ್ನು ಉಲ್ಲಂಘಿಸಿರುವ ಶಾಲೆಗಳ ವಿರುದ್ಧ ಪ್ರಸ್ತುತ ಸರ್ವೋಚ್ಚ ನ್ಯಾಯಾಲಯವು ನೀಡಿರುವ ಆದೇಶವನ್ನು ಪಾಲನೆ ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆನ್‌ಲೈನ್ ಕೋರ್ಸ್

1340(1958); ಶ್ರೀ ಅರವಿಂದ ಲಿಂಬಾವಳಿ (ಮಹದೇವಪುರ)

ಅ) ಮೈಸೂರು ವಿಶ್ವವಿದ್ಯಾಲಯದಲ್ಲಿ ಆನ್‌ಲೈನ್ ಕೋರ್ಸ್‌ಗೆ ಯೋಜನೆ ರೂಪಿಸಲಾಗಿದೆಯೇ; ಇದು ಎಂದಿನಿಂದ ಜಾರಿಗೆ ಬಂದಿದೆ;

ಆ) ಈ ಯೋಜನೆಯನ್ನು ಯಾವ ವಿಶ್ವವಿದ್ಯಾಲಯದೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ; ಇದರ ಸಾಧಕ–ಬಾಧಕಗಳೇನು;

ಇ) ಪ್ರಾರಂಭಿಕ ಹಂತದಲ್ಲಿ ಯಾವ ಕೋರ್ಸ್‌ಗಳನ್ನು ಆನ್‌ಲೈನ್‌ನಲ್ಲಿ ಪ್ರಾರಂಭಿಸಲಾಗುತ್ತದೆ; ಇದಕ್ಕೆ ಪರೀಕ್ಷಾರ್ಥ ಅಭ್ಯರ್ಥಿಗಳು ಅನುಸರಿಸಬೇಕಾದ ಮಾನದಂಡ ಪರಿಕರಗಳೇನು;

ಈ) ನೇರವಾಗಿ ಅಭ್ಯರ್ಥಿ ಪ್ರವೇಶ, ವ್ಯಾಸಂಗ ಹಾಗೂ ಪರೀಕ್ಷೆ ಬರೆಯಲು ವಿಶ್ವವಿದ್ಯಾಲಯ ಭೇಟಿ ನೀಡುವ ಅಗತ್ಯವಿಲ್ಲವೇ;